UNIREG
ದೂರವಾಣಿ ಸಂಖ್ಯೆ :2419440/2419361
ಫ್ಯಾಕ್ಸ್ ಸಂಖ್ಯೆ : 0821- 2419363/2419301

ಇಮೇಲ್ :registrar@uni-mysore.ac.in
ವೆಬ್ ಸೈಟ್: www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ1916

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್‌ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 406,
ಮೈಸೂರು–570 005.

ವಿಷಯ: 2021–22ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1. ವಿಶ್ವವಿದ್ಯಾನಿಲಯ ಆದೇಶ ಸಂಖ್ಯೆ: ಇಟಿ.11/45/2020–21, ದಿ. 13ನೇ ಅಕ್ಟೋಬರ್, 2021
2. ವಿಶ್ವವಿದ್ಯಾನಿಲಯ ಆದೇಶ ಸಂಖ್ಯೆ: ಇಟಿ.11/498/2018–19, ದಿ. 08–07–2021
3. ಅಧ್ಯಕ್ಷರು, ಇಂಗ್ಲೀಷ್ ಅಧ್ಯಯನ ವಿಭಾಗ, ಮಾಗಂ., ಮೈಸೂರು ಇವರ ಪತ್ರ ಸಂ. ಎಂ.ಜಿ/ಇಂಗ್ಲೀಷ್/201, ದಿನಾಂಕ 11–01–2022
4. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ 24–01–2022

*****

**ಪರಿಷ್ಕೃತ ಆದೇಶ ಸಂಖ್ಯೆ: ಇಟಿ11/498/2018–19, ದಿನಾಂಕ 24ನೇ ಜನವರಿ 2022.**

ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ ಹಾಗೂ ಉಲ್ಲೇಖ(2)ರ ಆದೇಶದ ಮುಂದುವರಿಕೆಯಾಗಿ, ಕೆಳಕಂಡ ಅತಿಥಿ ಉಪನ್ಯಾಸಕರಿಗೆ ಈಗಾಗಲೇ ಹಂಚಿಕೆ ಮಾಡಲಾಗಿದ್ದ ಬೋಧನಾ ಕಾರ್ಯಭಾರವನ್ನು ಈ ಕೆಳಗಿನಂತೆ ಪರಿಷ್ಕರಿಸಲಾಗಿದೆ.

| ಅತಿಥಿ ಉಪನ್ಯಾಸಕರ ಹೆಸರು | ವಿಷಯ ಮತ್ತು ಕಾಲೇಜು/ವಿಭಾಗ | ಉಲ್ಲೇಖ (2)ರ ಆದೇಶದಲ್ಲಿ ವಹಿಸಿದ್ದ ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯಭಾರ (ಗಂಟೆಗಳಲ್ಲಿ) * | ಉಲ್ಲೇಖ (2)ರ ಆದೇಶದಲ್ಲಿ ನಿಗದಿಪಡಿಸಿದ್ದ ಮಾಹೆಯಾನ ಸಂಭಾವನೆ | ಪ್ರಸ್ತುತ ನಿಗದಿಪಡಿಸಿರುವ ಪರಿಷ್ಕೃತ ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯಭಾರ (ಗಂಟೆಗಳಲ್ಲಿ) * | ಪರಿಷ್ಕೃತ ಸಂಭಾವನೆ ರೂ.ಗಳಲ್ಲಿ |
|---|---|---|---|---|---|
| ಅಶ್ವಿನಿ ಎಂ.ಬಿ. | ಇಂಗ್ಲೀಷ್ ಇಂಗ್ಲೀಷ್ ಅಧ್ಯಯನ ವಿಭಾಗ, ಮಾಗಂ., ಮೈಸೂರು | 08 | 18,500/– | 08+04=12 | 28,000/– |

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ಹಂಚಿಕೆ ಮಾಡುವರು. **ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.**

ಈ ವೆಚ್ಚವನ್ನು ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಖಾತೆಯ "ತಾತ್ಕಾಲಿಕ ಅಧ್ಯಾಪಕರ ವೇತನ" (ಕೋಡ್ 228) ಶೀರ್ಷಿಕೆಯಿಂದ ಭರಿಸಬಹುದಾಗಿದೆ.

ಷರತ್ತುಗಳು:

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಸ್ನಾತಕೋತ್ತರ ಕೇಂದ್ರದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಅಲುನೇ/2012–13ನೇ ಪಾವಿ–1, ದಿನಾಂಕ 02–07–2013ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿವಸ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

ಇ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾಜರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.

ಈ. ಮೈಸೂರು ವಿಶ್ವವಿದ್ಯಾನಿಲಯದಲ್ಲಿ 2021–22ನೇ ಶೈಕ್ಷಣಿಕ ವರ್ಷದಲ್ಲಿ 12 ಗಂಟೆಗಳ ಕಾರ್ಯಭಾರ ನಿರ್ವಹಿಸುವ ಅತಿಥಿ ಉಪನ್ಯಾಸಕರುಗಳು ಬೇರೆ ಸರ್ಕಾರಿ ಕಾಲೇಜು ಅಥವಾ ಖಾಸಗಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸಬಾರದು.

ಪು.ತಿ.ನೋ